**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| **ಸದಸ್ಯರ ಹೆಸರು** | : | **ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **1744 (1949)** |
| **ಉತ್ತರಿಸಬೇಕಾದ ಸಚಿವರು** | : | **ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | : | **24-03-2026** |

*****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಜಿಲ್ಲೆಯ ಪಿಎಂ ಮಿತ್ರ ಪಾರ್ಕ್ ಯೋಜನಾ ಪ್ರದೇಶದಿಂದ ರಾಷ್ಟ್ರೀಯ ಹೆದ್ದಾರಿಗೆ ಸಂಪರ್ಕ ಕಲ್ಪಿಸುವ ರಸ್ತೆ ನಿರ್ಮಾಣಕ್ಕಾಗಿ ಎಷ್ಟು ಕೋಟಿ ವೆಚ್ಚ ಮಾಡಲಾಗುತ್ತಿದೆ; ಕಾಮಗಾರಿಯು ಪ್ರಸ್ತುತ ಯಾವ ಹಂತದಲ್ಲಿದೆ; | ಪಿಎಂ ಮಿತ್ರ ಪಾರ್ಕ್ ಯೋಜನಾ ಪ್ರದೇಶದಿಂದ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ:50 ಕ್ಕೆ ಸಂಪರ್ಕ ಕಲ್ಪಿಸುವ 1.43 ಕಿ.ಮೀ ಉದ್ದದ ರಸ್ತೆ ನಿರ್ಮಾಣಕ್ಕಾಗಿ ಯೋಜನಾ ವೆಚ್ಚ ರೂ.9.98 ಕೋಟಿಗಳ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ. |
| ಆ) | ಪಿಎಂ ಮಿತ್ರ ಪಾರ್ಕ್ ಗೆ ನೀರು ಹರಿಸಲು ಜೇವರ್ಗಿ ತಾಲ್ಲೂಕಿನ ಮದ್ರಿ ಬಳಿ ಅಣೆಕಟ್ಟನ್ನು ಕಟ್ಟಲು ಎಷ್ಟು ಕೋಟಿ ವೆಚ್ಚ ಮಾಡಲಾಗುತ್ತಿದೆ; ಸದರಿ ಅಣೆಕಟ್ಟಿನ ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗಿದೆ ಮತ್ತು ಯಾವಾಗ ಪೂರ್ಣಗೊಳಿಸಲಾಗುವುದು; | ಪಿ.ಎಂ ಮಿತ್ರ ಪಾರ್ಕ್‌ಗೆ 3.63 MLD ಕುಡಿಯುವ ನೀರು ಒದಗಿಸಲು ಭೀಮಾ ನದಿಗೆ ಅಡ್ಡಲಾಗಿ ಮಾದ್ರಿ ಗ್ರಾಮದ ಬಳಿ ಬ್ಯಾರೇಜ್ ನಿರ್ಮಾಣ ಮಾಡಲು ಯೋಜನಾ ಮೊತ್ತ ರೂ.35.00 ಕೋಟಿಗಳಿಗೆ ಕಾಮಗಾರಿಯನ್ನು ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ಮಾಡಲಾಗುತ್ತಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆ. ಕಾರ್ಯಾದೇಶ ನೀಡಿದ ದಿನಾಂಕ:02-02-2026ರಿಂದ 18 ತಿಂಗಳಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದೆಂದು ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ, ಕಲಬುರುಗಿ ವಿಭಾಗ ರವರು ತಿಳಿಸಿರುತ್ತಾರೆ. |
| ಇ) | ಜವಳಿ ಪಾರ್ಕ್‌ಗೆ ಕೈಗಾರಿಕಾ ಉದ್ದೇಶಕ್ಕಾಗಿ ಬೇಕಾಗಿರುವ ನೀರನ್ನು ನಂದಿಕೂರು ಗ್ರಾಮದ ಎಸ್‌ಟಿಪಿ ಯಿಂದ ಸರಬರಾಜು ಮಾಡುವ ಪೈಪ್ ಲೈನ್ ಕಾಮಗಾರಿ ಹಾಗೂ ಜವಳಿ ಪಾರ್ಕ್ ಗೆ ಬೇಕಾಗುವ ವಿದ್ಯುತ್ ಸರಬರಾಜು ಮಾಡಲು ಪವರ್ ಸ್ಟೇಷನ್ ನಿರ್ಮಾಣದ ಪ್ರಸ್ತುತ ಸ್ಥಿತಿಗತಿಗಳ ವಿವರ ನೀಡುವುದು? | ಕುಡಿಯುವ ನೀರಿಗಾಗಿ ಮದ್ರಿ ಗ್ರಾಮದ ಬ್ಯಾರೇಜ್‌ನಿಂದ ಪಿ.ಎಂ ಮಿತ್ರ ಪಾರ್ಕ್‌ರವರೆಗೆ 3.63 MLD ನೀರು ಸರಬರಾಜಿಗೆ ಪೈಪ್‌ಲೈನ್ ಅಳವಡಿಸಲು ಹಾಗೂ ನಂದಿಕೂರು ಗ್ರಾಮದ ಒಳಚರಂಡಿ ಸಂಸ್ಕರಣಾ ಘಟಕದಿಂದ (STP) ಜವಳಿ ಪಾರ್ಕ್‌ರವರೆಗೆ 12.09 MLD ಸಂಸ್ಕರಿಸಿದ ನೀರನ್ನು ಪೂರೈಸಲು ಒಟ್ಟು ಯೋಜನಾ ಮೊತ್ತ ರೂ.116.00 ಕೋಟಿಗಳು ಅನುಮೋದನೆಯಾಗಿರುತ್ತದೆ.<br><br>ಪಿ.ಎಂ ಮಿತ್ರ ಪಾರ್ಕ್‌ಗೆ 180 ಮೆಗಾ ವ್ಯಾಟ್ ವಿದ್ಯುತ್ ಸರಬರಾಜಿಗೆ 01 ಸಂಖ್ಯೆಯ 220 KV ವಿದ್ಯುತ್ |

| | | |
|---|---|---|
| | | ಉಪ ಕೇಂದ್ರ ಮತ್ತು ಪ್ರಸರಣ ಮಾರ್ಗದ ಸ್ಥಾಪನೆ ಹಾಗೂ 04 ಸಂಖ್ಯೆಯ 110 KV ವಿದ್ಯುತ್ ಉಪ ಕೇಂದ್ರ ಮತ್ತು ಪ್ರಸರಣ ಮಾರ್ಗದ ಸ್ಥಾಪನೆಗೆ ಯೋಜನಾ ಮೊತ್ತ ರೂ.229.288 ಕೋಟಿಗಳಿಗೆ ಅನುಮೋದನೆಯಾಗಿದ್ದು, ಸದರಿ ಕಾಮಗಾರಿಯನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಕಲಬುರಗಿ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಕಾಮಗಾರಿಗೆ ದಿನಾಂಕ: 29.01.2026 ರಂದು ಕೆಪಿಟಿಸಿಎಲ್, ಕಾರ್ಪೋರೇಟ್ ಕಛೇರಿಯಿಂದ ಟೆಂಡರ್ ಆಹ್ವಾನಿಸಲಾಗಿದ್ದು, ಪ್ರಗತಿಯಲ್ಲಿದೆ.<br><br>ಕೆ.ಕೆ.ಆರ್.ಡಿ.ಬಿ ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆಯ ಆಯವ್ಯಯದಲ್ಲಿ ಒಟ್ಟಾರೆ ರೂ.95.81 ಕೋಟಿಗಳನ್ನು ಅನುಷ್ಠಾನ ಇಲಾಖೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ. |

ಸಂಖ್ಯೆ: CI 86 JAKE 2026

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು